ಪಿ.ಡಬ್ಲ್ಯು-01

**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

# O.S. No.233/2023

| | | |
|---|---|---|
| ಸಾಕ್ಷಿದಾರರ ಹೆಸರು | : | ನಟರಾಜು ಆರ್ |
| ತಂದೆಯ ಹೆಸರು | : | ರಂಗಯ್ಯ |
| ವಯಸ್ಸು | : | 67 ವರ್ಷ |
| ಉದ್ಯೋಗ | : | ನಿವೃತ್ತ ಸರ್ಕಾರಿ ನೌಕರ |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 25.07.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎ.ಎಂ.ಎಂ ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿನಾಂಕಃ 10.02.2022 ರ ನೊಂದಾಯಿತ ಕ್ರಯದ ಕರಾರು ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ದಿನಾಂಕಃ 08.08.2022 ರ ಮುಂದುವರಿದ ಕರಾರು ಪತ್ರದ ಮೂಲಕ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-2 ಎಂದು ಗುರುತಿಸಲಾಯಿತು.

ದಿನಾಂಕಃ 03.05.2023 ರಂದು ನಮ್ಮ ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿರುವ ಲೀಗಲ್ ನೋಟಿಸ್ ನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-3 ಎಂದು ಗುರುತಿಸಲಾಯಿತು.

ದಿನಾಂಕಃ 12.05.2023 ರಂದು ಪ್ರತಿವಾದಿಗಳು ತಮ್ಮ ವಕೀಲರ ಮೂಲಕ ನಮ್ಮ ವಕೀಲರು ನೀಡಿದ ಲೀಗಲ್ ನೋಟಿಸ್ ಗೆ ನೀಡಿರುವ ಪ್ರತ್ಯುತ್ತರದ ನೋಟಿಸ್ ನ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-4 ಎಂದು ಗುರುತಿಸಲಾಯಿತು.

ದಿನಾಂಕಃ 19.05.2023 ರಂದು ನಮ್ಮ ವಕೀಲರು ಪ್ರತಿವಾದಿಗಳ ಪರ ವಕೀಲರಿಗೆ ನೀಡಿರುವ ನೋಟಿಸಿನ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-5 ಎಂದು ಗುರುತಿಸಲಾಯಿತು.

06 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.- 6 ರಿಂದ ನಿ.ಪಿ.-11 ಎಂದು ಗುರುತಿಸಲಾಯಿತು.

06 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿ.ಪಿ.- 12 ರಿಂದ ನಿ.ಪಿ.-17 ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಮಾನ್ಯ ಪ್ರತಿವಾದಿಗಳ ಪರ ವಕೀಲರು ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**